ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1543**
ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 18.03.2021
ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

*****

	ಪ್ರಶ್ನೆ	ಉತ್ತರ
ಅ)	ಕಲಬುರಗಿಯಲ್ಲಿ ಸ್ಥಾಪನೆಯಾಗಬೇಕಿದ್ದ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ಕಚೇರಿ ಬೇರೆಡೆಗೆ ಸ್ಥಳಾಂತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಇಂಧನ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯನ್ನು ಬೇರೆಡೆಗೆ ಸ್ಥಳಾಂತರಿಸಲಾಗಿರುವುದಿಲ್ಲ. ಕಲಬುರಗಿ ಪ್ರಾಂತೀಯ ಕಛೇರಿ ವ್ಯಾಪ್ತಿಯಲ್ಲಿ ಹೊಸ ಯೋಜನೆಗಳು ಇಲ್ಲದೇ ಇರುವುದರಿಂದ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಪ್ರಧಾನ ವ್ಯವಸ್ಥಾಪಕರ ನಿವೃತ್ತಿಯ ನಂತರ ಆರ್ಥಿಕ ಹೊರೆಯ ಹಿನ್ನೆಲೆಯಲ್ಲಿ ಈ ಕಛೇರಿಯನ್ನು ತೆರವುಗೊಳಿಸಲಾಗಿರುತ್ತದೆ.
ಆ)	ಹಾಗಿದ್ದಲ್ಲಿ, ಸ್ಥಳಾಂತರಗೊಳಿಸಲು ಕಾರಣಗಳೇನು: (ವಿವರ ನೀಡುವುದು)	
ಇ)	ಸದರಿ ಕಚೇರಿಯು ಕಲಬುರಗಿಯಲ್ಲಿಯೇ ಸ್ಥಾಪನೆಯಾಗಬೇಕೆಂಬುದು ಸ್ಥಳೀಯರ ಅಗ್ರಹವಾಗಿದ್ದು, ಸದರಿ ಕಚೇರಿಯನ್ನು ಪುನಃ ಇಲ್ಲಿಯೇ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ಕಲ್ಯಾಣ ಕರ್ನಾಟಕ ಭಾಗದಲ್ಲಿ ನವೀಕರಿಸಬಹುದಾದ ಇಂಧನ ಮೂಲಗಳ ಹೊಸ ತಾಂತ್ರಿಕತೆಯೊಳಗೊಂಡ ಹಲವು ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಪ್ರಸ್ತಾಪಿಸಲಾಗಿದೆ. ಪ್ರಮುಖವಾಗಿ, ಪಾವಗಡ ಸೌರಶಕ್ತಿ ಪಾರ್ಕನ ಮಾದರಿಯಲ್ಲಿ ಕಲಬುರ್ಗಿಯ ಸಮೀಪದ ಫರತಾಬಾದ್ ಪ್ರದೇಶದಲ್ಲಿ ಪಿಸಿಕೆಎಲ್‌ರವರ 1500 ಎಕರೆ ಜಮೀನಿನಲ್ಲಿ 500 ಮೆ.ವ್ಯಾ ಸಾಮರ್ಥ್ಯದ ಸೌರಶಕ್ತಿ ಪಾರ್ಕನ್ನು ಅಭಿವೃದ್ಧಿಪಡಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಯೋಜಿಸಲಾಗಿದೆ. ಮುಂದುವರೆದು, ನವ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಹೊಸ ಆಕರ್ಷಣೆಯಾಗಿ ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಜಲಾನಯನ ಪ್ರದೇಶದಲ್ಲಿ (ಕೆರೆ ಹಾಗೂ ಅಣೆಕಟ್ಟು) 1 ಮೆ.ವ್ಯಾ ಸಾಮರ್ಥ್ಯದ ತೇಲುವ ಸೌರಶಕ್ತಿ ವಿದ್ಯುತ್ ಘಟಕವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಈ ಯೋಜನೆಗಾಗಿ ಕಲಬುರ್ಗಿ ನಗರ ಪ್ರದೇಶದಲ್ಲಿನ ಶರಣ ಬಸವೇಶ್ವರ (ಅಪ್ಪಾರವರ) ಕೆರೆಯನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕಾಗಿ ಹಾಗೂ ಇಂಧನ ಉಳಿತಾಯ ಮತ್ತು ಇಂಧನ ಸಂರಕ್ಷಣೆಯ ಕಾರ್ಯಕ್ರಮಗಳನ್ನು ಈ ಭಾಗದಲ್ಲಿ ಆಯೋಜಿಸಲು ಅನುವಾಗಲು ಕಲಬುರಗಿ ನಗರ ಪ್ರದೇಶದಲ್ಲಿ ಸಂಸ್ಥೆಯ ವಲಯ ಕಛೇರಿಯನ್ನು ಪುನರಾರಂಭಿಸಲಾಗುತ್ತಿದೆ.

ಸಂಖ್ಯೆ: ಎನರ್ಜಿ 73 ಇಬಿಎಸ್ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ